# Akashvani : Bangalore
# Regional Bulletin In Kannada
# 08.12.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ- ಅಗಲಿದ ಗಣ್ಯರಿಗೆ ಉಭಯ ಸದನಗಳಲ್ಲಿ ಸಂತಾಪ

೨. ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ; ೫೭೦ ಜನರ ಬಂಧನ: ಮೇಲ್ಮನೆಯಲ್ಲಿ ಸಚಿವ ಕೆ.ಹೆಚ್.ಮುನಿಯಪ್ಪ ಸ್ಪಷ್ಟನೆ

೩. ವರುಣಾ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರಿಗೆ ಆಮಿಷ ಆರೋಪ- ಮುಖ್ಯಮಂತ್ರಿ ಹಾಗೂ ಚುನಾವಣಾ ಆಯೋಗಕ್ಕೆ ಸುಪ್ರೀಂಕೋರ್ಟ್ ನೋಟೀಸ್

೪. ಅಧಿವೇಶನದಲ್ಲಿ ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚಿಸುವಂತೆ ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹ

೫. ಮಂಗಳೂರಿನಿಂದ ತೆರಳುವ, ಆಗಮಿಸುವ ೨೨ ಇಂಡಿಗೋ ವಿಮಾನಗಳ ಸಂಚಾರ ಇದೇ ೧೩ರವರೆಗೆ ಸ್ಥಗಿತ

**<><*<><>*><>**

ಬೆಳಗಾವಿಯಲ್ಲಿ ವಿಧಾನ ಮಂಡಲದ ಉಭಯ ಸನದಗಳ ಅಧಿವೇಶನ ಆರಂಭಗೊಂಡಿದೆ. ವಿಧಾನಸಭೆ ಕಲಾಪ ಆರಂಭಗೊಳ್ಳುತ್ತಿದ್ದಂತೆಯೇ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು. ಮಾಜಿ ಸಚಿವ ಹಾಗೂ ವಿಧಾನಸಭೆಯ ಹಾಲಿ ಶಾಸಕ ಎಮ್, ವೈ, ಮೇಟಿ, ಮಾಜಿ ಶಾಸಕರಾದ ಆರ್.ವಿ.ದೇವರಾಜ್, ಶಿವಶರಣಪ್ಪಗೌಡ ಪಾಟೀಲ್, ವೃಕ್ಷಮಾತೆ ಪದ್ಮಶ್ರೀ ಸಾಲುಮರದ ತಿಮ್ಮಕ್ಕ, ಸರಸ್ವತಿ ಸಮ್ಮಾನ ಪ್ರಶಸ್ತಿ ವಿಜೇತ ಹಿರಿಯ ಸಾಹಿತಿ ಎಸ್.ಎಲ್. ಬೈರಪ್ಪ, ಕನ್ನಡ ಚಲನಚಿತ್ರರಂಗದ ಹೆಸರಾಂತ ಹಿರಿಯನಟ ಎಂ.ಎಸ್. ಉಮೇಶ್ ಅವರ ನಿಧನಕ್ಕೆ ಸದನದಲ್ಲಿ ಸಂತಾಪ ವ್ಯಕ್ತವಾಯಿತು. ಸದನ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಯು.ಟಿ.ಖಾದರ್ ಸಂವಿಧಾನದ ಪೀಠಿಕೆ ಓದಿದರು. ಸಭಾಧ್ಯಕ್ಷರು ಮಂಡಿಸಿದ ಸಂತಾಪ ಸೂಚನೆ ನಿರ್ಣಯದ ಮೇಲೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಸಚಿವ ಹಾಲಿ ಶಾಸಕ ಮೇಟಿ ನಿಧನದಿಂದ ಸಾರ್ವಜನಿಕ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ತಿಳಿಸಿದರು.

ಸಾಲುಮರದ ತಿಮ್ಮಕ್ಕ ೧೧೪ ವರ್ಷ ಬದುಕಿದ್ದರು. ಇವರಿಗೆ ಮಕ್ಕಳಿಲ್ಲದ ಹಿನ್ನೆಲೆಯಲ್ಲಿ ಮರಗಳನ್ನೆ ಮಕ್ಕಳಂತೆ ಸಾಕಿದ್ದರು. ಸುಮಾರು ನಾಲ್ಕು ಸಾವಿರ ಮರಗಳನ್ನು ನೆಟ್ಟು ಬೆಳಸಿ ಪರಿಸರ ರಕ್ಷಣೆಯಲ್ಲಿ ಅಪಾರ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು. ಪದ್ಮಭೂಷಣ, ಪುರಸ್ಕೃತ ಡಾ ಎಸ್.ಎಲ್.ಬೈರಪ್ಪ ದೇಶ ಕಂಡ ಅತ್ಯಂತ ಶ್ರೇಷ್ಠ ಕಾದಂಬರಿಕಾರ. ಅವರು ೨೫ ಕಾದಂಬರಿಗಳನ್ನು ಬರೆದಿದ್ದಾರೆ. ಬೈರಪ್ಪ ಅವರ ಹಲವಾರು ಕಾದಂಬರಿಗಳು ಇಂಗ್ಲೀಷ್ ಸಹಿತ ಬೇರೆ ಭಾಷೆಗಳಿಗೂ ಅನುವಾದವಾಗಿದೆ ಎಂದು ಹೇಳಿದರು. ಪ್ರತಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಹಲವರು, ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿದರು. ವಿಧಾನ ಪರಿಷತ್‌ನಲ್ಲಿಯೂ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು. ಸಭಾಪತಿ ಬಸವರಾಜ ಹೊರಟ್ಟಿ ಸಂತಾಪ ಸೂಚನೆಯ ನಿರ್ಣಯ ಮಂಡಿಸಿದರು. ಮೃತರ ಗೌರವಾರ್ಥ ಪರಿಷತ್ ಸದಸ್ಯರು ಒಂದು ನಿಮಿಷದ ಮೌನ ಆಚರಿಸಿದರು..

<><*<><>*><>

ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ೫೭೦ ಜನರನ್ನು ಬಂಧಿಸಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ವಿಧಾನ ಪರಿಷತ್‌ನಲ್ಲಿಂದು  ಸದಸ್ಯ ಸಿ. ಟಿ. ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ, ಮಾತನಾಡಿದ ಅವರು, ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ಒಟ್ಟು ೨ ಲಕ್ಷದ ೯೭ ಸಾವಿರ ಕ್ವಿಂಟಾಲ್ ಅಕ್ಕಿಯನ್ನು ಹಾಗೂ ೩೧೪ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಪಡಿತರ ಚೀಟಿದಾರರು ಪಡಿತರ ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣಗಳು ಕಂಡುಬಂದಲ್ಲಿ ಸದರಿ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಅಧಿವೇಶನದ ಪ್ರತಿ ಬುಧವಾರ ಹಾಗೂ ಗುರುವಾರದ ಇಡೀ ದಿನದ ಕಲಾಪವನ್ನು ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ವಿಶೇಷ ಚರ್ಚೆಗೆ ಮೀಸಲಿಡಲಾಗುವುದು ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ಸುವರ್ಣಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಗದಿಪಡಿಸಿದ ದಿನಗಳಂದು ಬೇರೆ ಯಾವುದೇ ವಿಷಯಗಳ ಚರ್ಚೆಗೆ ಅವಕಾಶ ಕಲ್ಪಿಸದೇ, ಕೃಷ್ಣಾ ಮೇಲ್ದಂಡೆ ಯೋಜನೆ, ಮಹಾದಾಯಿ, ಕಳಸಾ ಬಂಡೂರಿ ಯೋಜನೆಗಳ ಅನುಷ್ಠಾನ ಸೇರಿದಂತೆ ಉತ್ತರಕರ್ನಾಟಕದ ಬಗ್ಗೆ ಚರ್ಚೆಗೆ ಅವಕಾಶ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಕಾರ್ಯಕಲಾಪಗಳ ಸಲಹಾ

ಸಮಿತಿ ತೀರ್ಮಾನದಂತೆ ಇನ್ನಿತರೆ ವಿಷಯಗಳ ಮೇಲೂ ಚರ್ಚೆ ನಡೆಯಲಿದೆ ಎಂದು ಸಭಾಪತಿ ತಿಳಿಸಿದ್ದಾರೆ.

**<><*<><>*><>**

ವರುಣಾ ವಿಧಾನಸಭಾ ಕ್ಷೇತ್ರದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಯ್ಕೆಯನ್ನು ಪ್ರಶ್ನಿಸಿ, ಸಲ್ಲಿಸಲಾದ ಅರ್ಜಿಯನ್ನು ಪರಿಶೀಲಿಸಲು ಸರ್ವೋಚ್ಚ ನ್ಯಾಯಾಲಯ ಒಪ್ಪಿಕೊಂಡಿದೆ. ನ್ಯಾಯಮೂರ್ತಿಗಳಾದ ವಿಕ್ರಮ್‌ನಾಥ್ ಮತ್ತು ಸಂದೀಪ್ ಅವರಿದ್ದ ಪೀಠವು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಚುನಾವಣಾ ಆಯೋಗಕ್ಕೆ ನೊಟೀಸ್ ಜಾರಿ ಮಾಡಿದೆ. ಹೈಕೋರ್ಟ್ ನ್ಯಾಯಮೂರ್ತಿ ಎಸ್.ಸುನೀಲ್‌ದತ್ ಯಾದವ್ ನೇತೃತ್ವದ ಏಕಸದಸ್ಯ ಪೀಠ ಅರ್ಜಿಗಳನ್ನು ಅಸ್ಪಷ್ಟ ಸಾಂದರ್ಭಿಕವಾಗಿ ರಚಿಸಲಾಗಿದೆ ಎಂದು ಅಭಿಪ್ರಾಯಪಟ್ಟಿತ್ತು. ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೇಲ್ಮನವಿ ಸಲ್ಲಿಸಲಾಗಿತ್ತು. ವರುಣಾ ಕ್ಷೇತ್ರದ ಮತದಾರರೊಬ್ಬರು ಸಲ್ಲಿಸಿದ್ದ ಅರ್ಜಿಯಲ್ಲಿ ಕಾಂಗ್ರೆಸ್‌ನ ಐದು ಚುನಾವಣಾ ಭರವಸೆಗಳು ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್-೧೨೩ರಡಿಯಲ್ಲಿ ಲಂಚ ಮತ್ತು ಅನಗತ್ಯ ಪ್ರಭಾವವನ್ನು ಹೊಂದಿವೆ ಎಂದು ಆರೋಪಿಸಿದ್ದರು.

**<><*<><>*><>**

ಬೆಳಗಾವಿ ಅಧಿವೇಶನದಲ್ಲಿ ರಾಜ್ಯದ ಜ್ವಲಂತ ಸಮಸ್ಯೆಗಳ ಕುರಿತು ಸಮಗ್ರವಾಗಿ ಚರ್ಚಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ, ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರಕಾರದ ನಿರ್ಲಕ್ಷ್ಯದಿಂದ ಕಬ್ಬು ಬೆಳೆಗಾರರು, ಮೆಕ್ಕೆ ಜೋಳ ಬೆಳೆಗಾರರು, ಭತ್ತ ಬೆಳೆಯುವ ರೈತರು, ತೊಗರಿ ಬೆಳೆಗಾರರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ನೇಕಾರರ ಸಮಸ್ಯೆ, ರಾಜ್ಯದ ಅಭಿವೃದ್ಧಿ ವಿಚಾರ- ಇವೆಲ್ಲವು ಅಧಿವೇಶನದಲ್ಲಿ ಚರ್ಚೆ ಆಗಬೇಕಿದೆ. ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳ ಬಗ್ಗೆಯೂ ಚರ್ಚೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಬಿಗಿಭದ್ರತೆಯ ನಡುವೆ ಅಧಿವೇಶನ ನಡೆಯುತ್ತಿದೆ. ಈ ನಡುವೆ, ಅಧಿವೇಶನ ವಿರೋಧಿಸಿ ಸಮಾವೇಶ ಆಯೋಜಿಸಲು ಯತ್ನಿಸಿದ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದ್ದಾರೆ. ಮತ್ತೊಂದು ಬೆಳವಣಿಗೆಯಲ್ಲಿ ಶಿವಸೇನೆ ಉದ್ದವ್ ಠಾಕ್ರೆ ಬಣದ ಕಾರ್ಯಕರ್ತರು ಮಹಾರಾಷ್ಟ್ರದ ಕೊಲ್ಲಾಪುರ ಜಿಲ್ಲೆಯಲ್ಲಿ ರಾಜ್ಯ ರಸ್ತೆ ಸಾರಿಗೆ ನಿಗಮ ಬಸ್‌ಗಳನ್ನು ತಡೆದು ಪೋಸ್ಟರ್‌ಗಳನ್ನು ಅಂಟಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಗಡಿ ಪ್ರದೇಶದಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದೆ.

<><*<><>*><>

ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ತೆರಳುವ ಹಾಗೂ ಆಗಮಿಸುವ ಇಂಡಿಗೋ ವಿಮಾನಯಾನ ಸಂಸ್ಥೆಯ ವಿಮಾನಗಳ ಹಾರಾಟವನ್ನು ಇಂದಿನಿಂದ ಇದೇ ೧೩ರವರೆಗೆ ರದ್ದುಪಡಿಸಲಾಗಿದೆ ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ. ಆರು ದಿನಗಳ ಕಾಲ ಒಟ್ಟು ೨೨ ಇಂಡಿಗೋ ವಿಮಾನಗಳ ಸಂಚಾರ ಮಂಗಳೂರು-ಬೆಂಗಳೂರು, ಬೆಂಗಳೂರು-ಮಂಗಳೂರು, ಮಂಗಳೂರು-ಮುಂಬೈ, ಮುಂಬೈ-ಮಂಗಳೂರು ನಡುವೆ ಸಂಚಾರ ಸ್ಥಗಿತಗೊಳಿಸಿವೆ. ಸದ್ಯ ಮಂಗಳೂರು ವಿಮಾನ ನಿಲ್ದಾಣದಿಂದ ಕೇವಲ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನಗಳು ದೇಶಿಯ ಹಾಗೂ ಅಂತಾರಾಷ್ಟ್ರೀಯ ಸಂಚಾರ ನಡೆಸುತ್ತಿವೆ.

<><*<><>*><>

ರಾಜ್ಯದಲ್ಲಿ ಕಬ್ಬು ಬೆಳೆಗಾರರ ಸಮಸ್ಯೆ ಹಾಗೂ ಮೆಕ್ಕೆಜೋಳ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ತಾವು ಸರ್ಕಾರಕ್ಕೆ ದುಬಾರಿಯಾಗುವ ತೀರ್ಮಾನ ಕೈಗೊಂಡಿದ್ದೇವೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಉತ್ತರ ಕರ್ನಾಟಕದ ಸಮಸ್ಯೆಗಳಿಗೆ ಉತ್ತರ ನೀಡಬೇಕಾಗಿರುವುದು ಕೇಂದ್ರ ಸರ್ಕಾರ ಎಂದು ಹೇಳಿದ್ದಾರೆ. "ಕಬ್ಬು ಬೆಳೆಗಾರರ ಸಮಸ್ಯೆ, ಮೆಕ್ಕೆಜೋಳ ವಿಚಾರವಾಗಿ ಸಂಸದ ಬಸವರಾಜ ಬೊಮ್ಮಾಯಿ, ಸಂಸತ್ತಿನಲ್ಲಿ ಯಾಕೆ ಧ್ವನಿ ಎತ್ತುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ.

<><*<><>*><>

ಕಬ್ಬು, ಮೆಕ್ಕೆಜೋಳಕ್ಕೆ ಕೇಂದ್ರ ಬೆಂಬಲ ಬೆಲೆ ನೀಡದೇ ಅನ್ಯಾಯ ಮಾಡುತ್ತಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಆರೋಪಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಎಲ್ಲ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುತ್ತ ಬಂದಿದೆ. ಕೇಂದ್ರ ಸರ್ಕಾರ ರಾಜ್ಯದ ಮೇಲೆ ಮಲತಾಯಿ ಧೋರಣೆ ಮುಂದುವರೆಸುತ್ತಿದೆ ಎಂದು ದೂರಿದ್ದಾರೆ.

<><*<><>*><>

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ-ವಿಟಿಯುನಲ್ಲಿ ಇಂದು ಮತ್ತು ನಾಳೆ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ -೨೦೨೫ ಗ್ರ್ಯಾಂಡ್ ಫಿನಾಲೆ ಜರುಗಲಿದೆ. ದೇಶದ ವಿವಿಧ ಶಿಕ್ಷಣ ಸಂಸ್ಥೆಗಳಿಂದ ಆಯ್ಕೆಯಾದ ೨೦ ಶ್ರೇಷ್ಠ ವಿದ್ಯಾರ್ಥಿಗಳ ತಂಡಗಳು ಸೆಂಟರ್‌ನಲ್ಲಿ ಸತತ ೩೬ ಗಂಟೆಗಳ ಕಾಲ ತಂತ್ರಜ್ಞಾನ ಆಧಾರಿತ, ಪರಿಣಾಮಕಾರಿ ಪರಿಹಾರಗಳನ್ನು ರೂಪಿಸಲಿವೆ. ಸಾರಿಗೆ ಮತ್ತು ಲಾಜಿಸ್ಟಿಕ್ಸ್, ಸ್ವದೇಶಿ ಕ್ಲೀನ್ ಮತ್ತು ಗ್ರೀನ್ ಟೆಕ್ನಾಲಜಿ ಮೊದಲಾದ ಪ್ರಮುಖ ಸಮಸ್ಯೆಗಳಿಗೆ ವಿದ್ಯಾರ್ಥಿಗಳ ತಂಡ ಪರಿಹಾರಗಳನ್ನು ಹುಡುಕಲಿವೆ. ವಿಜೇತ ತಂಡಗಳಿಗೆ ನಾಳೆ

ಜರುಗಲಿರುವ ಸಮಾರೋಪದಲ್ಲಿ ಬಹುಮಾನ ವಿತರಣೆ ನಡೆಯಲಿದೆ ಎಂದು ವಿಟಿಯು ಕುಲಪತಿ ಪ್ರೊಫೆಸರ್ ಎಸ್.ವಿದ್ಯಾಶಂಕರ ತಿಳಿಸಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿ ಹಮ್ಮಿಕೊಂಡಿರುವ ಆದಿ ಜಗದ್ಗುರು ಶಿವರಾತ್ರೀಶ್ವರ ಶಿವಯೋಗಿಗಳ ೧ ಸಾವಿರದ ೬೬ನೇ ಜಯಂತ್ಯುತ್ಸವ ಕಾರ್ಯಕ್ರಮಕ್ಕೆ ಇದೇ ೧೬ ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ರಾಷ್ಟ್ರಪತಿಗಳ ಕರ್ತವ್ಯದಲ್ಲಿ ಲೋಪ ಆಗದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು. ಅವರು ಸಂಚರಿಸುವ ರಸ್ತೆ ಸಂಪೂರ್ಣವಾಗಿ ದುರಸ್ತಿಗೊಳಿಸಬೇಕು. ರಸ್ತೆಗಳ ಸ್ವಚ್ಛತೆ ಮಾಡಬೇಕು. ಆಂಬ್ಯುಲೆನ್ಸ್ ಹಾಗೂ ತಜ್ಞ ವೈದ್ಯರ ಸೇವೆ ಒದಗಿಸಬೇಕು ಎಂದು ಸೂಚನೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**